**ಶ್ರೀ ಎಸ್.ವ್ಹಿ. ಸಂಕನೂರ ವಿಧಾನ ಪರಿಷತ್ತಿನ ಸದಸ್ಯರು ಇವರು ಮಂಡಿಸಿರುವ ನಿಯಮ-72 ರಡಿಯ ಪ್ರಶ್ನೆಗೆ ಉತ್ತರಿಸುವ ಕುರಿತು.**

**ಪ್ರಶ್ನೆ**:ರಾಜ್ಯದ ಕೃಷಿ ವಿಶ್ವವಿದ್ಯಾಲಯ, ಧಾರವಾಡದಲ್ಲಿ ಶೇಕಡಾ 60 ಕ್ಕಿಂತ ಹೆಚ್ಚು ಬೋಧಕ ಹುದ್ದೆಗಳು ನಿವೃತ್ತಿ, ರಾಜೀನಾಮೆ ಇತ್ಯಾದಿ ಕಾರಣಗಳಿಂದ ತೆರವಾಗಿದ್ದು,ಸದರಿ ಹುದ್ದೆಗಳಲ್ಲಿ ಒಂದೂ ಹುದ್ದೆಯನ್ನು ತುಂಬದೇ ಇರುವ ಕಾರಣದಿಂದಾಗಿ ಗುಣಮಟ್ಟದ ಶಿಕ್ಷಣ ನೀಡಲು ಸಾಧ್ಯವಾಗುತ್ತಿಲ್ಲ ಎಂಬುದರ ಕುರಿತು ಮಾನ್ಯ ಕೃಷಿ ಸಚಿವರ ಗಮನ ಸೆಳೆಯಬಯಸುತ್ತೇನೆ.

****

**ಉತ್ತರ**:-

- ಕೃಷಿ ವಿಶ್ವವಿದ್ಯಾಲಯ, ಧಾರವಾಡದಲ್ಲಿ ಭರ್ತಿಯಾಗದೇ ಖಾಲಿ ಇರುವ 202 ಬೋಧಕ ಹುದ್ದೆಗಳ ಭರ್ತಿಗಾಗಿ ಅನುಮತಿ ನೀಡುವಂತೆ ಕೋರಿ, ಕುಲಸಚಿವರು, ಕೃಷಿ ವಿಶ್ವವಿದ್ಯಾಲಯ, ಧಾರವಾಡ ರವರು ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

- ರಾಜ್ಯದ ನಾಲ್ಕೂ ಕೃಷಿ ವಿಶ್ವವಿದ್ಯಾಲಯಗಳಲ್ಲಿ ಖಾಲಿಯಿರುವ ಬೋಧಕ/ಬೋಧಕೇತರ ಹುದ್ದೆಗಳ ಪೈಕಿ ಕನಿಷ್ಟ ಶೇಕಡಾ 50 ರಷ್ಟು ಹುದ್ದೆಗಳನ್ನು ಭರ್ತಿ ಮಾಡುವ ಕುರಿತು ಪರಿಶೀಲಿಸಲಾಗುತ್ತಿದ್ದು, ಈ ಪೈಕಿ ಶೇಕಡಾ 50 ರಷ್ಟು ಹುದ್ದೆಗಳ ಮಾಹಿತಿಯನ್ನು ಒದಗಿಸುವಂತೆ, ಕುಲಸಚಿವರು, ಕೃಷಿ ವಿಶ್ವವಿದ್ಯಾಲಯ, ಧಾರವಾಡ ರವರನ್ನು ಕೋರಲಾಗಿತ್ತು.

- ಕೃಷಿ ವಿಶ್ವವಿದ್ಯಾಲಯ, ಧಾರವಾಡದಲ್ಲಿ ಭರ್ತಿಯಾಗದೇ ಖಾಲಿ ಇರುವ ಬೋಧಕ ಹುದ್ದೆಗಳ ಪೈಕಿ ಕನಿಷ್ಟ ಶೇಕಡಾ 50 ರಷ್ಟು ಹುದ್ದೆಗಳು, ಎಂದರೆ 100 ಬೋಧಕ ಹುದ್ದೆಗಳ ಮಾಹಿತಿಯನ್ನು ಸಲ್ಲಿಸಿರುತ್ತಾರೆ.

- ಪ್ರಸ್ತುತ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯ ಸುತ್ತೋಲೆ ಸಂಖ್ಯೆ:ಸಿಆಸುಇ 388 ಸೇನೇನಿ 2024, ದಿನಾಂಕ:25-11-2024 ರಲ್ಲಿ, ದಿನಾಂಕ: 28-10-2024 ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ತೆಗೆದುಕೊಂಡ ನಿರ್ಣಯದಂತೆ, ರಾಜ್ಯ ಸಿವಿಲ್ ಸೇವೆಗಳಲ್ಲಿನ ಮೀಸಲಾತಿ ಅನ್ವಯವಾಗುವ ವೃಂದಗಳಲ್ಲಿನ ಹುದ್ದೆಗಳಿಗೆ ನೇರ ನೇಮಕಾತಿ ಮಾಡಲು ಹೊಸದಾಗಿ ಯಾವುದೇ ಅಧಿಸೂಚನೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ, ಮುಂದಿನ ಆದೇಶದವರೆಗೂ ಹೊರಡಿಸಬಾರದೆಂದು ಸೂಚಿಸಿರುವ ಹಿನ್ನೆಲೆಯಲ್ಲಿ, ಕೃಷಿ ವಿಶ್ವವಿದ್ಯಾಲಯ, ಧಾರವಾಡದ ನೇರ ನೇಮಕಾತಿ ಮೂಲಕ ಹುದ್ದೆಗಳ ಭರ್ತಿ ಮಾಡಲು ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯು ವಿಧಿಸಿರುವ ನಿರ್ಬಂಧವನ್ನು ಹಿಂಪಡೆದ / ತೆರವುಗೊಳಿಸಿದ ನಂತರ ಪ್ರಸ್ತಾವನೆಯನ್ನು ಸಲ್ಲಿಸುವಂತೆ ಕೃಷಿ ವಿಶ್ವವಿದ್ಯಾಲಯ, ಧಾರವಾಡಕ್ಕೆ ತಿಳಿಸಲಾಗಿದೆ.

**ಸಂಖ್ಯೆ**:AGRI/52/AUD/2025

**(ಎನ್.ಚಲುವರಾಯಸ್ವಾಮಿ)**
ಕೃಷಿ ಸಚಿವರು.